ಕನ್ನಡಪ್ರಭ

**Friday 16th June 2023, Page No.07**

# Hiremagaluru Kannan inaugurated the Kannada Suvarna Mahotsava held in the RVCE Campus

## ಕನ್ನಡ ಭಾಷೆ ಉಳಿಸಿ ಬೆಳೆಸಲು ನಾಡಿನ ಎಲ್ಲರೂ ದೃಢ ಸಂಕಲ್ಪ ಮಾಡಿ: ಹಿರೇಮಗಳೂರು ಕಣ್ಣನ್

### ನಗರದ ಆರ್.ವಿ. ಕಾಲೇಜಿನಲ್ಲಿ ನಡೆದ ಕನ್ನಡ ಸಂಘದ ಸುವರ್ಣ ಮಹೋತ್ಸವದಲ್ಲಿ ಭಾಗಿ



ನಗರದ ಆರ್.ವಿ.ತಾಂತ್ರಿಕ ಮಹಾ ವಿದ್ಯಾಲಯದಲ್ಲಿ ನಡೆದ ಕಾರ್ಯಕ್ರಮವನ್ನು ಸಾಹಿತಿ ಕಣ್ಣನ್ ಮುಂತಾದವರು ಉದ್ಘಾಟಿಸಿದರು.

• **ಕನ್ನಡಪ್ರಭ ವಾರ್ತೆ** ಕೆಂಗೇರಿ

ಸಾವಿರಾರು ವರ್ಷಗಳ ಇತಿಹಾಸವಿರುವ ಕನ್ನಡ ಭಾಷಾ ಬೆಳವಣಿಗೆಗೆ ಹಲವಾರು ಮಹನೀಯರು ಕೊಡುಗೆ ನೀಡಿ ಹೋಗಿದ್ದಾರೆ. ಭಾಷೆಯನ್ನು ಉಳಿಸಿ ಬೆಳೆಸಲು ನಾಡಿನ ಪ್ರತಿಯೊಬ್ಬರು ದೃಢ ಸಂಕಲ್ಪ ಮಾಡಬೇಕಿದೆ ಎಂದು ಸಾಹಿತಿ ಹಿರೇಮಗಳೂರು ಕಣ್ಣನ್ ಕರೆ ನೀಡಿದರು.

ನಗರದ ಆರ್.ವಿ.ತಾಂತ್ರಿಕ ಮಹಾ ವಿದ್ಯಾಲಯದಲ್ಲಿ ಆವರಣದಲ್ಲಿ '8ನೇ ಮೈಲ್ ಟೆಕ್ನೋ ಕಲ್ಚರಲ್ ಫೆಸ್ಟ್ 2023' ಮತ್ತು 'ಕರ್ನಾಟಕ 2023 ಕನ್ನಡ ಹಬ್ಬ'ಕ್ಕೆ ಚಾಲನೆ ನೀಡಿ ಮಾತನಾಡಿ ಅವರು, ಕಳೆದ 50 ವರ್ಷಗಳ ಹಿಂದೆ ಕನ್ನಡ ಸಂಘವನ್ನು ಆರಂಭಿಸಿ ಕನ್ನಡ ಪರ ಚಟುವಟಿಕೆ ನಡೆಸುವ ಮೂಲಕ ಕನ್ನಡ ಭಾಷಾ ಬೆಳವಣಿಗೆಗೆ ಕೊಡುಗೆ ನೀಡಿ ಸುವರ್ಣ ಮಹೋತ್ಸವ ಆಚರಿಸುತ್ತಿರುವ ಕನ್ನಡ ಸಂಘದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ತಾಂತ್ರಿಕವಿದ್ಯಾಲಯವಾದರೂಕನ್ನಡದ ಬಗ್ಗೆ ಕಳಕಳಿ ವ್ಯಕ್ತಪಡಿಸಿ ಕನ್ನಡ ಪರ ವಾತಾವರಣನಿರ್ಮಾಣಮಾಡುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ ಎಂದರು.

ನಮ್ಮ ಪೂರ್ವಜರು ಕನ್ನಡ ಸಾಹಿತ್ಯದಲ್ಲಿ ಗಣಿತ, ವಿಜ್ಞಾನ, ಗಾದೆ, ಒಗಟುಗಳ ಮೂಲಕ ಜೀವನ ಮೌಲ್ಯಗಳನ್ನು ಸಾರಿ ಜ್ಞಾನದ ಭಂಡಾರವನ್ನು ಹೆಚ್ಚಿಸಿಕೊಂಡು ಸಾಹಿತ್ಯ, ಕಲೆ, ಸಂಸ್ಕೃತಿ ಪರಂಪರೆ ಮೂಲಕ ಕನ್ನಡ ಭಾಷೆಯನ್ನು ಶ್ರೀಮಂತಗೊಳಿಸಿದ್ದಾರೆ ಎಂದು ಹೇಳಿದರು.

ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್ ಅಧ್ಯಕ್ಷ ಡಾ। ಎಂ.ಪಿ.ಶ್ಯಾಮ್ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿ, ಕಾಲೇಜಿನಲ್ಲಿ ಗುಣಮಟ್ಟದ ಶಿಕ್ಷಣದೊಂದಿಗೆ ಕಲೆ, ಸಾಹಿತ್ಯ, ಸಂಸ್ಕೃತಿ ಉತ್ತಮ ವಿಚಾರಧಾರೆಗಳತ್ತ ಒಲವು ಮೂಡಿಸಿಕೊಳ್ಳುವ ವಾತಾವರಣ ನಿರ್ಮಾಣ ಮಾಡಲು ದೃಢ ಹೆಜ್ಜೆ ಇಟ್ಟು ಕಾರ್ಯನಿರ್ವಹಿಸಲಾಗುತ್ತಿದೆ ಎಂದು ತಿಳಿಸಿದರು.

ವಿದ್ಯಾರ್ಥಿಗಳಲ್ಲಿ ಅಡಗಿರುವ ಸುಪ್ತ ಪ್ರತಿಭೆಗೆ ಪ್ರೋತ್ಸಾಹ ನೀಡಿ ರಾಷ್ಟ್ರ, ಅಂತಾರಾಷ್ಟ್ರೀಯಮಟ್ಟದಲ್ಲಿಪ್ರತಿಭೆಯನ್ನು ಅನಾವರಣಗೊಳಿಸಲು ಎಲ್ಲ ರೀತಿಯ ಸಹಕಾರ ನೀಡಲಾಗುತ್ತಿದೆ ಎಂದರು.

ಕನ್ನಡ ಸಂಘದ ಮೂಲಕ ನಿರಂತರ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಂಡು ಕನ್ನಡ ಭಾಷಾ ಬೆಳವಣಿಗೆಗೆ ಕೊಡುಗೆ ನೀಡಲಾಗುತ್ತಿದೆ ಎಂದರು.